# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ : 296
ಸದಸ್ಯರ ಹೆಸರು : ಡಾ|| ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 16/07/2019.
ಉತ್ತರಿಸಬೇಕಾದ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು.

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯಲ್ಲಿನ ಪ್ರೌಢ ಶಿಕ್ಷಣ ವಿಭಾಗದಲ್ಲಿ ಹೆಚ್ಚುವರಿ ಶಿಕ್ಷಕರನ್ನು ಗುರುತಿಸುವುದರಲ್ಲಿ ಲೋಪವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ) | ಬಂದಿದಲ್ಲಿ, ಪ್ರೌಢಶಿಕ್ಷಕರಿಗೆ ಇದರಿಂದಾಗುವ ಬಾಧಕಗಳನ್ನು ಸರ್ಕಾರವು ಅರಿತಿದೆಯೇ; | ಈ ಬಗ್ಗೆ ಪರಿಶೀಲಿಸಿ ನ್ಯೂನ್ಯತೆಗಳನ್ನು ಇತ್ಯರ್ಥಪಡಿಸಲಾಗಿದೆ.<br>ಶಾಲೆಗಳಲ್ಲಿ ಸಿಬ್ಬಂದಿ ಸ್ಥರವಿನ್ಯಾಸಕ್ಕಿಂತ ಹೆಚ್ಚಾಗಿರುವ ಶಿಕ್ಷಕರ ಹುದ್ದೆಗಳನ್ನು ಹೆಚ್ಚುವರಿ ಎಂದು ಗುರುತಿಸಿ, ಹೆಚ್ಚುವರಿ ಪ್ರಕ್ರಿಯೆ ನಡೆಸಲಾಗುತ್ತದೆ. |
| ಇ) | ಹೆಚ್ಚುವರಿ ಶಿಕ್ಷಕರ ಪ್ರಕ್ರಿಯೆಯಲ್ಲಿರುವ ಗೊಂದಲಗಳನ್ನು ನಿವಾರಿಸಲು ಸರ್ಕಾರವು ತೆಗೆದುಕೊಂಡಿರುವ ಕ್ರಮಗಳೇನು? (ಮಾಹಿತಿ ನೀಡುವುದು). | ಶಿಕ್ಷಕರು ಟಿ.ಡಿ.ಎಸ್. ತಂತ್ರಾಂಶದಲ್ಲಿ ಸ್ವತಃ ದಾಖಲಿಸಿದ ಮಾಹಿತಿಯನ್ನು ಆಧರಿಸಿ ಹೆಚ್ಚುವರಿ ಪ್ರಕ್ರಿಯೆಗಳನ್ನು ನಡೆಸಲಾಗುತ್ತಿದ್ದು, ಶಿಕ್ಷಕರಿಗೆ ತಮ್ಮ ಸೇವಾ ವಿವರಗಳನ್ನು . ಟಿ.ಡಿ.ಎಸ್ ತಂತ್ರಾಂಶದಲ್ಲಿ ಪರಿಶೀಲಿಸಿಕೊಂಡು ಅಪ್ಡೇಟ್ ಮಾಡಲು ಅವಕಾಶ ಕಲ್ಪಿಸಲಾಗಿದೆ.<br>ಹೆಚ್ಚುವರಿ ಪ್ರಕ್ರಿಯೆಗೆ ಸಂಬಂಧಿಸಿದಂತೆ ಶಿಕ್ಷಕರಿಂದ ಸ್ವೀಕರಿಸಿದ ಮನವಿ ಪತ್ರಗಳನ್ನು ಪರಿಶೀಲಿಸಿ, ಕಾಲಕಾಲಕ್ಕೆ ತಿದ್ದುಪಡಿ ಹೊರಡಿಸಿ ಸರಿಪಡಿಸಲಾಗುತ್ತಿದೆ. ಇದಕ್ಕೆ ಸಾಕಷ್ಟು ಕಾಲಾವಕಾಶ ನೀಡಲಾಗಿದೆ. |

**ಸಂಖ್ಯೆ: ಇಪಿ 12 ಎಲ್.ಬಿ.ಪಿ 2019**

(ಎಸ್.ಆರ್. ಶ್ರೀನಿವಾಸ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು